# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ ಎನ್ ಮಂಜೇಗೌಡ ರವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ

## ವಿಷಯ

ಮೈಸೂರು ನಗರ ಕರ್ನಾಟಕ ಸಾಂಸ್ಕೃತಿಕ ನಗರಿ ಎಂದು ಪ್ರಖ್ಯಾತವಾಗಿದೆ, ಇದಲ್ಲದೆ, ಮೈಸೂರು ಕೋಟ್ಯಾಂತರ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿರುವುದು ಸರಿಯಷ್ಟೆ. ವಿಶ್ವವಿಖ್ಯಾತ ಖ್ಯಾತಿಯ ದೇಶದ ಮೊದಲ ವಿಶ್ವವಿದ್ಯಾಲಯವನ್ನು ಮೈಸೂರು ಮಹಾರಾಜರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ರವರು ನಿರ್ಮಿಸಿ, ನೂರಾರು ವರ್ಷಗಳಿಂದ ಇಲ್ಲಿಂದ ಲಕ್ಷಾಂತರ ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ಹಾಗೂ ಮೈಸೂರು ಮಹಾರಾಜರು ನಿರ್ಮಾಣ ಮಾಡಿರುವ ಮೈಸೂರಿನ ಅತೀ ಹಳೆಯದಾದ ಮಹಾರಾಣಿ ಸರ್ಕಾರಿ ಕಾಲೇಜುಗಳಿಂದ ಬಹಳಷ್ಟು ಮಂದಿ ಬಡ ಮಕ್ಕಳಿಗೆ ಶಿಕ್ಷಣ ದೊರಕುತ್ತದೆ.

ಆದರೆ, ಮೈಸೂರು ನಗರದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಇಲ್ಲದಿರುವುದು ಅತ್ಯಂತ ವಿಷಾಧನೀಯ ಸಂಗತಿ, ಏಕೆಂದರೆ ನಮ್ಮ ನೆರೆಯ ಎಲ್ಲಾ ಜಿಲ್ಲೆಗಳಲ್ಲಿ ಈಗಾಗಲೇ (ಚಾಮರಾಜನಗರ, ಮಂಡ್ಯ, ಹಾಸನ ಮತ್ತು ರಾಮನಗರ ಇತ್ಯಾದಿ) ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿವೆ, ಇದೇ ಮಾದರಿಯಲ್ಲಿ ಮೈಸೂರು ನಗರದಲ್ಲಿ ಇಂಜಿನಿಯರಿಂಗ್ ಕಾಲೇಜನ್ನು ತೆರೆಯುವ ಬಗ್ಗೆ.

## ಉತ್ತರ

ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಎಐಸಿಟಿಇ ನಿಯಮಗಳನ್ನು ಪಾಲಿಸಬೇಕಾಗಿರುತ್ತದೆ. ಸದರಿ ಎಐಸಿಟಿಇ ಮಾರ್ಗಸೂಚಿಗಳನ್ವಯ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ನಿಯಮಾನಸಾರ ಅವಶ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸಿಕೊಂಡು ಎಐಸಿಟಿಇ ಅನುಮೋದನೆ ಪಡೆದು ಪ್ರಾರಂಭಿಸಬೇಕಾಗಿರುತ್ತದೆ.

ಮೈಸೂರಿನಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ವಿವರ ಈ ಕೆಳಕಂಡಂತಿದೆ:

| ಕ್ರಮ ಸಂಖ್ಯೆ | ಮೈಸೂರು ಜಿಲ್ಲೆ |
|---|---|
| **ಸರ್ಕಾರಿ ವಿಶ್ವೇಶ್ವರಾಯ ಟೆಕ್ನಲಾಜಿಕಲ್ ಯುನಿವರ್ಸಿಟಿ ಪ್ರಾದೇಶಿಕ ಸಂಸ್ಥೆಗಳು** | |
| 1 | ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯ, ಮೈಸೂರು |
| **ಖಾಸಗಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು** | |
| 2 | ದಿ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್, ಮೈಸೂರು |
| 3 | ಶ್ರೀ ಜಯಚಾಮರಾಜೇಂದ್ರ ಕಾಲೇಜ್ ಆಫ್ ಇಂಜಿನಿಯರಿಂಗ್, ಮೈಸೂರು |

ಪ್ರಸ್ತುತ ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಬಲವರ್ಧನೆ ಮಾಡುವ ಉದ್ದೇಶವನ್ನು ಸರ್ಕಾರ ಹೊಂದಿದೆ. ಹೊಸ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸುವ ಉದ್ದೇಶ ಇರುವುದಿಲ್ಲ.

ಆದಾಗ್ಯೂ ಬೇಡಿಕೆಗೆ ಅನುಗುಣವಾಗಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು ಪ್ರಾರಂಭಿಸುವ ಕುರಿತು ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸಮಿತಿ ರಚಿಸಲಾಗುವುದು. ಸಮಿತಿಯ ವರದಿಯಂತೆ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು.

ಸಂಖ್ಯೆ: ಇಡಿ 16 ಹೆಚ್‌ಪಿಟಿ 2024)

(ಡಾ: ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು